(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮ ಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಯವರು): ಮಾನ್ಯ ಅಧ್ಯಕ್ಷರೆ,

2009ರ ಕರ್ನಾಟಕ ಪೌರನಿಗಮಗಳ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2009ರ ಕರ್ನಾಟಕ ಪೌರನಿಗಮಗಳ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

ಅನುಬಂಧ–1

ಆ) ಕರ್ನಾಟಕ ಸ್ಟಾಂಪ್ (ಎರಡನೇ ತಿದ್ದುಪಡಿ) ವಿಧೇಯಕ 2009

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಜಿ.ಕರುಣಾಕರ ರೆಡ್ಡಿ (ಕಂದಾಯ ಸಚಿವರು) : ಮಾನ್ಯ ಅಧ್ಯಕ್ಷರೆ,

2009ರ ಕರ್ನಾಟಕ ಸ್ಟಾಂಪ್ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಶ್ರೀ ಜಿ.ಕರುಣಾಕರ ರೆಡ್ಡಿ (ಕಂದಾಯ ಸಚಿವರು) : ಮಾನ್ಯ ಅಧ್ಯಕ್ಷರೆ, ಮಾನ್ಯ ಮುಖ್ಯಮಂತ್ರಿಯವರು ಆಯವ್ಯಯದಲ್ಲಿ ಘೋಷಣೆ ಮಾಡಿರುವ ವಿಷಯದಲ್ಲಿ ಮೂರು ವಿಚಾರಗಳನ್ನು ಬಿಟ್ಟು ಹೋಗಿದ್ದವು. ಅದಕ್ಕೆ ಮಾನ್ಯ ರಾಜ್ಯಪಾಲರಿಂದ ಆದ್ಯಾದೇಶವನ್ನು ದಿನಾಂಕ: 04–06–2009ರಲ್ಲಿ ಹೊರಡಿಸಲಾಗಿತ್ತು. ಅದು Apartment ಮತ್ತು plotಗಳಿಗೆ ತಗಲುವ ಮುದ್ರಾಂಕ ಶುಲ್ಕವನ್ನು 7 1/2 ನಿಂದ ಶೇ. 6ಕ್ಕೆ ಇಳಿಸುವುದು, ಅದೇ ರೀತಿ ವಿಮೆಗೆ ಒಳಪಟ್ಟ, ವರ್ಗಾವಣೆಗೆ ಒಳಪಟ್ಟ, ವರ್ಗಾವಣೆ ಪತ್ರಗಳ ಮೇಲೆ ಮುದ್ರಾಂಕ ಶುಲ್ಕವನ್ನು ಶೇ. 7 1/2 ರಿಂದ ಶೇ. 6ಕ್ಕೆ ಇಳಿಸುವುದು, ಅದೇ ರೀತಿ ಸ್ಥಿರಾಸ್ತಿಗಳ ಮಾರಾಟ ಮಾಡಲು ಪ್ರತಿನಿಧಿಗೆ ಅಧಿಕಾರವನ್ನು ನೀಡಿದ ಪಕ್ಷದಲ್ಲಿ ಜಿಪಿಎ ಮುದ್ರಾಂಕ ಶುಲ್ಕವನ್ನು ಕ್ರಯಪತ್ರಗಳಿಗೆ ಅನ್ವಯವಾಗುವಂತೆ ಶೇ.7 1/2 ಯಿಂದ ಶೇ.6ಕ್ಕೆ ಇಳಿಸುವುದು. ಈ ಮೂರು ವಿಷಯಗಳನ್ನು ಸೇರಿಸುವುದಕ್ಕೆ Ordinance ಆಗಿದೆ. ಅದನ್ನು replace ಮಾಡುವುದಕ್ಕೆ ಈ ವಿಧೇಯಕ, ಈ ವಿಧೇಯಕಕ್ಕೆ ಈ ಸದನ ಒಪ್ಪಿಗೆ ಕೊಡಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಇದು stamp duty ಯನ್ನು ಕಡಿಮೆ ಮಾಡುವುದು.

ಅಧ್ಯಕ್ಷರು : ಪ್ರಸ್ತಾವ ಏಕೆಂದರೆ,

"2009ರ ಕರ್ನಾಟಕ ಸ್ಟಾಂಪ್ (ಎರಡನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಖಂಡ 2 ರಿಂದ 3ರವರೆಗೆ

ಅಧ್ಯಕ್ಷರು : "ಖಂಡ 2 ಮತ್ತು 3 ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

(ಖಂಡ 2 ರಿಂದ 3ರವರೆಗೆ ಎರಡು ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು.

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ

ಶ್ರೀ ಜಿ.ಕರುಣಾಕರ ರೆಡ್ಡಿ (ಕಂದಾಯ ಸಚಿವರು) : ಮಾನ್ಯ ಅಧ್ಯಕ್ಷರೆ,

2009ರ ಕರ್ನಾಟಕ ಸ್ಟಾಂಪ್ (ಎರಡನೇ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವನೆ ಏನೆಂದರೆ,

"2009ರ ಕರ್ನಾಟಕ ಸ್ಟಾಂಪು (ಎರಡನೇ ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಸೂದೆಗೆ ಒಪ್ಪಿಗೆ ನೀಡಲಾಯಿತು

ಅನುಬಂಧ–2